**JUNE 12, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಶಕ್ತಿ ಯೋಜನೆಯಿಂದ ಔದ್ಯೋಗಿಕ ಕ್ಷೇತ್ರದಲ್ಲಿ ಮಹಿಳೆಯರ ಪಾಲುದಾರಿಕೆ ಹೆಚ್ಚಳ– ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಬಿಬಿಎಂಪಿ ವ್ಯಾಪ್ತಿಯಲ್ಲಿ ಬಾಕಿ ಆಸ್ತಿ ತೆರಿಗೆ ಪಾವತಿಗೆ 'ಒಂದು ಬಾರಿ ಪರಿಹಾರ ಯೋಜನೆ'–ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ರಾಜ್ಯದಲ್ಲಿ ಸರ್ಕಾರಿ ಜಾಗಗಳ ಸಂರಕ್ಷಣೆ ಹಾಗೂ ಒತ್ತುವರಿ ತೆರವಿಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಅಳವಡಿಕೆ– ಕಂದಾಯ ಸಚಿವ ಕೃಷ್ಣಬೈರೇಗೌಡ.**

- **2047 ರ ವೇಳೆಗೆ ಇಂಧನ ಕ್ಷೇತ್ರದಲ್ಲಿ, ಭಾರತ ಸ್ವಾವಲಂಬನೆ ಸಾಧಿಸುವುದು ನೂತನ ಸರ್ಕಾರದ ಪ್ರಮುಖ ಸಂಕಲ್ಪ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ಇಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ: ವಿಧಾಯಕ ಕಾರ್ಯಕ್ರಮಗಳ ಮೂಲಕ ಜಾಗೃತಿ.**

**ಈಗ ವಾರ್ತೆಗಳ ವಿವರ**

***********

**ಒಂದು ವರ್ಷ ಪೂರೈಸಿರುವ ಶಕ್ತಿ ಯೋಜನೆಯಿಂದ ಔದ್ಯೋಗಿಕ ಕ್ಷೇತ್ರದಲ್ಲಿ ಮಹಿಳೆಯರ ಪಾಲುದಾರಿಕೆ ಏರಿಕೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.**

**ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಂದೇಶ ದಾಖಲಿಸಿರುವ ಅವರು, ಕಳೆದೊಂದು ವರ್ಷದಲ್ಲಿ ದೂರಪ್ರಯಾಣ ಮಾಡಿ ಹೆಣ್ಣುಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಇದನ್ನು ಹಲವು ಸಮೀಕ್ಷೆಗಳು ವರದಿ ಮಾಡಿವೆ. ಒಟ್ಟಿನಲ್ಲಿ ಶಕ್ತಿ ಯೋಜನೆ ನಾಡಿನಲ್ಲಿ ಶಕ್ತಿ ಸಂಚಾರ ಸೃಷ್ಟಿಸಿದೆ ಎಂದಿದ್ದಾರೆ.**

ರಾಜ್ಯದಲ್ಲಿ ಪ್ರತಿನಿತ್ಯ ಸರಾಸರಿ 54 ಲಕ್ಷದಿಂದ 70 ಲಕ್ಷದವರೆಗೆ ಮಹಿಳೆಯರು ಉಚಿತವಾಗಿ ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದಾರೆ. ಈ ಯೋಜನೆಯಿಂದ ಮಹಿಳಾ ನೌಕರರು, ಗಾರ್ಮೆಂಟ್ ಕಾರ್ಮಿಕರು, ಕೂಲಿಕಾರರು, ಬಡವರು, ವಿದ್ಯಾರ್ಥಿನಿಯರಿಗೆ ಅನುಕೂಲವಾಗಿದೆ. ಇದು ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ ಹೊಸ ಇತಿಹಾಸ ಸೃಷ್ಟಿಸಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. .

*******

ಬಿಬಿಎಂಪಿ ವ್ಯಾಪ್ತಿಯಲ್ಲಿ ಬಾಕಿ ಆಸ್ತಿ ತೆರಿಗೆ ಪಾವತಿಗೆ ಸರ್ಕಾರ ಒಂದು ಬಾರಿ ಪರಿಹಾರ ಯೋಜನೆ ರೂಪಿಸಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ತಿ ತೆರಿಗೆ ಬಿಬಿಎಂಪಿಯ ಆದಾಯದ ಪ್ರಾಥಮಿಕ ಮೂಲವಾಗಿದ್ದು, ಸುಮಾರು 4 ಲಕ್ಷ ನಾಗರಿಕರು 1000 ಕೋಟಿ ಆಸ್ತಿತೆರಿಗೆ ಪಾವತಿಸದಿರುವುದು ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ 'ಒಂದು ಬಾರಿ ಪರಿಹಾರ ಯೋಜನೆ'ಯ ಐತಿಹಾಸಿಕ ನಿರ್ಣಯ ತೆಗೆದುಕೊಂಡಿದೆ ಎಂದರು.

ಇದರಡಿ ಬಾಕಿ ಆಸ್ತಿ ತೆರಿಗೆ ಮೇಲೆ ಪಾವತಿಸಬೇಕಾದ ಬಡ್ಡಿಯನ್ನು ಸಂಪೂರ್ಣವಾಗಿ ಮನ್ನಾ ಮಾಡಲಾಗಿದ್ದು, ದಂಡವನ್ನು ಅರ್ಧಕ್ಕೆ ಇಳಿಸಲಾಗಿದೆ. ಈ ಅವಕಾಶ ಜುಲೈ 31 ಕ್ಕೆ ಕೊನೆಗೊಳ್ಳಲಿದ್ದು, ಜೀವಮಾನದಲ್ಲಿ ಒಮ್ಮೆ ಮಾತ್ರ ಈ ಯೋಜನೆಯ ಅವಕಾಶವಿದ್ದು, ಇದರ ವಿಸ್ತರಣೆ ಇರುವುದಿಲ್ಲ ಎಂದು ಡಿ.ಕೆ.ಶಿವಕುಮಾರ ತಿಳಿಸಿದರು.

*******

ರಾಜ್ಯದಲ್ಲಿ ಸರ್ಕಾರಿ ಜಾಗಗಳ ಸಂರಕ್ಷಣೆ ಹಾಗೂ ಒತ್ತುವರಿ ತೆರವು ಮಾಡುವ ನಿಟ್ಟಿನಲ್ಲಿ ಕಂದಾಯ ಇಲಾಖೆ ಲ್ಯಾಂಡ್ ಬೀಟ್ ವ್ಯವಸ್ಥೆ ಅಳವಡಿಸಿದೆ ಎಂದು ಕಂದಾಯ ಸಚಿವ ಕೃ ್ಣಬೈರೇಗೌಡ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಧುರೆ ಹೋಬಳಿಗಳ ಗ್ರಾಮಗಳಿಗೆ ಭೇಟಿ ನೀಡಿ ಲ್ಯಾಂಡ್ ಬೀಟ್ ಹಾಗೂ ಆಧಾರ್ ಸೀಡಿಂಗ್ ವ್ಯವಸ್ಥೆ ಪರಿಶೀಲಿಸಿ ಮಾತನಾಡಿದ ಅವರು, ಮೊಬೈಲ್ ಆ್ಯಪ್ ಮೂಲಕ ಗ್ರಾಮಗಳ ಹಾಗೂ ಸರ್ವೆ ಸಂಖ್ಯೆಗಳ ಪ್ರಕಾರದಂತೆ ದಾಖಲೀಕರಣ ಮಾಡಲಾಗುತ್ತಿದೆ. ಮಾರ್ಚ್ ತಿಂಗಳಿನಿಂದ ಇಲ್ಲಿಯವರೆಗೆ 14 ಲಕ್ಷ ಸರ್ಕಾರಿ ಜಾಗಗಳನ್ನು ಅಪ್‌ಲೋಡ್ ಮಾಡಲಾಗಿದ್ದು, ಇದರಲ್ಲಿ 5.9 ಲಕ್ಷ ಜಾಗಗಳನ್ನು ಮೊಹಜರು ಮಾಡಲಾಗಿದೆ ಎಂದರು.

ಆರ್.ಟಿ.ಸಿಗೆ ಆಧಾರ್ ಸಂಖ್ಯೆಯನ್ನು ಜೋಡಣೆ ದೃಢೀಕರಣ ಅಭಿಯಾನ ಸಹ ಚಾಲನೆಯಲ್ಲಿದ್ದು, ಈ ಮೂಲಕ ಕೃಷಿ ಆಸ್ತಿಗಳಿಗೆ ಭದ್ರತೆ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

*******

10ನೇ ಅಂತರಾಷ್ಟ್ರೀಯ ಯೋಗ ದಿನವನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಆಯು ್
ಇಲಾಖೆಯಿಂದ ಆಯೋಜಿಸಲಾಗಿದ್ದ 10 ದಿನಗಳ ಯೋಗೋತ್ಸವ ಕಾರ್ಯಕ್ರಮಕ್ಕೆ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ನಿನ್ನೆ ಬೆಂಗಳೂರಿನಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯೋಗ ದಿನಾಚರಣೆ ಕೇವಲ ಒಂದು ದಿನಕ್ಕೆ ಸೀಮಿತವಾಗದೇ ಜನರು ಪ್ರತಿನಿತ್ಯ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

*******

ಕಳೆದ ಒಂದು ದಶಕದಿಂದ ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 2.5 ಲಕ್ಷ ಹುದ್ದೆಗಳನ್ನು ಹಂತ, ಹಂತವಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳುವಂತೆ ವಿಧಾನಪರಿಷತ್ ಸದಸ್ಯ ಎಸ್.ವಿ.ಸಂಕನೂರ ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಅವರಿಗೆ ಪತ್ರ ಬರೆದಿರುವ ಅವರು, ನೌಕರರ ಕೊರತೆಯಿಂದ ಸಾರ್ವಜನಿಕರ ಕೆಲಸ ಕಾರ್ಯಗಳು ತ್ವರಿತಗತಿಯಲ್ಲಿ ಆಗುತ್ತಿಲ್ಲ. ದಿನನಿತ್ಯ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದಿದ್ದಾರೆ.

ಇದರಿಂದ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಮೇಲೆಯೂ ಒತ್ತಡ ಉಂಟಾಗಿ ಸ್ವಯಂ ನಿವೃತ್ತಿ ಪಡೆಯುತ್ತಿದ್ದಾರೆ. ಇಂತಹ ಪರಿಸ್ಥಿತಿ ಉಂಟಾಗದಂತೆ ಮತ್ತು ನೌಕರರ ಒತ್ತಡ ಕಡಿಮೆ ಮಾಡಲು ಸರಕಾರ 32 ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಹಂತ,ಹಂತವಾಗಿ ತುಂಬಿಕೊಳ್ಳಲು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

*******

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತವನ್ನು ಜಾಗತಿಕ ಉತ್ಪಾದನಾ ಕೇಂದ್ರವನ್ನಾಗಿ ರೂಪಿಸುವ ದೃಷ್ಟಿಯೊಂದಿಗೆ ಹೊಸ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ, ಹೊಸ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ 2ನೇ ಬಾರಿಗೆ ಸಂಪುಟ ದರ್ಜೆಯ ಸಚಿವರಾಗಿ, ತಮಗೆ ವಹಿಸಿದ ಇಲಾಖೆಗಳ ಅಧಿಕಾರ ವಹಿಸಿಕೊಂಡ ನಂತರ ಮಾತನಾಡಿದ ಅವರು, 2047ರ ವೇಳೆಗೆ ಭಾರತ ಇಂಧನ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸುವುದು ನಮ್ಮ ಪ್ರಮುಖ ಸಂಕಲ್ಪವಾಗಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ಎಲ್ಲ ಜನರಿಗೆ ಆಹಾರ ಭದ್ರತೆ ಖಾತರಿಪಡಿಸಲು ಸರ್ಕಾರ ಬದ್ಧವಾಗಿದೆ. ದೇಶದಲ್ಲಿ ನೈಸರ್ಗಿಕ ಕೃಷಿಯನ್ನು ಬಲಪಡಿಸುವ ನಿಟ್ಟಿನಲ್ಲಿ ಮತ್ತ ್ಟ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

*******

ಇತ್ತೀಚಿಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿದ್ದು, ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಹಾಗು ಔ ’ದೋಪಚಾರ ನೀಡುವಂತೆ ಸೂಚನೆ ನೀಡಲಾಗಿದೆ ಎಂದು ಉಡುಪಿ– ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ತಿಳಿಸಿದ್ದಾರೆ.

ಚಿಕ್ಕಮಗಳೂರು ನಗರದ ಸರ್ಕಾರಿ ಆಸ್ಪತ್ರೆಗೆ ನಿನ್ನೆ ಭೇಟಿ ನೀಡಿ ಪರಿಶಿಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡೆಂಗ್ಯು ಜ್ವರದಿಂದ 300 ಕ್ಕು ಅಧಿಕ ರೋಗಿಗಳು ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಬೆಡ್ ವ್ಯವಸ್ಥೆ, ಹೆಚ್ಚಿನ ಚಿಕಿತ್ಸೆ ಬೇಕಾದವರಿಗೆ ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಡುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಇಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಹಾಗೂ ಈ ಅನಿ ್ಟ ಪದ್ಧತಿಯ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ ಆಚರಿಸಲಾಗುತ್ತದೆ.

‘ನಮ್ಮ ಬದ್ಧತೆ ಮೇಲೆ ಕಾರ್ಯನಿರ್ವ ಹಿಸೋಣ: ಬಾಲಕಾರ್ಮಿಕತೆಯನ್ನು ಕೊನೆಗೊಳಿಸೋಣ ಎನ್ನುವುದು ಈ ಬಾರಿಯ ಧ್ಯೇಯ್ಯ ವಾಕ್ಯ. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮತ್ತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ರಾಜ್ಯದ ಹಲವೆಡೆ ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ.

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ನಿಷೇಧ ಮತ್ತು ನಿಯಂತ್ರಣ ಕಾಯ್ದೆ 1986 ಮತ್ತು ತಿದ್ದುಪಡಿ ಕಾಯ್ದೆ 2016 ರ ಕುರಿತು ಜಿಲ್ಲೆಯಾದ್ಯಂತ ಬೀದಿ ನಾಟಕಗಳು, ಆಟೋ ಪ್ರಚಾರ, ಕಲ್ಯಾಣ ಮಂಟಪಗಳಲ್ಲಿ ಡಿಜಿಟಲ್ ವಾಲ್ ಪೋಸ್ಟರ್ ಹಾಗೂ ಧ್ವನಿ ಸುರಳಿ ಮೂಲಕ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

*******

ವಿಶ್ವಮಾನ್ಯ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ ನಿನ್ನೆ ಮೈಸೂರಿನಲ್ಲಿ ನಿಧನರಾದರು. ಅವರಿಗೆ 92 ವರ್ಷ ವಯಸ್ಸಾಗಿತ್ತು. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು, ಕಳೆದ ಕೆಲ ದಿನಗಳಿಂದ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

ಕುವೆಂಪುನಗರದ ಜ್ಞಾನಗಂಗಾ ಶಾಲೆ ಬಳಿ ಇರುವ ಅವರ ಮನೆಯಲ್ಲಿ ಇಂದು ಬೆಳಗ್ಗೆ 9.30 ರಿಂದ 11 ರವರೆಗೆ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಸಾರ್ವಜನಿಕರಿಗೆ ಅವಕಾಶ ಕಲ್ಪಿಸಿಕೊಡಲಾಗುತ್ತದೆ. ಬಳಿಕ ನಗರದಲ್ಲೇ ಅಂತ್ಯಕ್ರಿಯೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಅಂತರರಾಷ್ಟ್ರೀಯ ಖ್ಯಾತಿಯ ಸರೋದ್ ವಾದಕ ಅಲಿ ಅಕ್ಬರ್ ಖಾನ್ ಅವರಲ್ಲಿ ಸರೋದ್ ಕಲಿತು ಅಪ್ರಮತಿಮ ಕಲಾವಿದರಾಗಿ ಬೆಳೆದವರು. 1980ರ ದಶಕದಲ್ಲಿ ಆಡೆನ್ ವಿಶ್ವವಿದ್ಯಾಲಯದಲ್ಲಿ ಇಂಗ್ಲಿ ಶ್ ಸಾಹಿತ್ಯ ಬೋಧನೆ ಮಾಡುತ್ತಿದ್ದ ಅವರು, 1995ರಿಂದ 2005 ರವರೆಗೆ ಕ್ಯಾಲಿಫೋರ್ನಿಯಾ ಇನ್‌ಸ್ಟಿಟ್ಯೂಟ್ ಆಫ್ ಆರ್ಟ್ಸ್‌ನ ವಿಶ್ವ ಸಂಗೀತ ವಿಭಾಗದಲ್ಲಿ ಭಾರತೀಯ ಸಂಗೀತ ಕಾರ್ಯಕ್ರಮದ ಮುಖ್ಯಸ್ಥರಾಗಿಯೂ ಸೇವೆ ಸಲ್ಲಿಸಿದ್ದರು.

ಪದ್ಮಶ್ರೀ, ಕೇಂದ್ರ ಸಂಗೀತ ನಾಟಕ ಅಕಾಡೆಮಿ, ರಾಜ್ಯ ಸಂಗೀತ ವಿದ್ವಾನ್, ಚೌಡಯ್ಯ ಪ್ರಶಸ್ತಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವು ಪ್ರಶಸ್ತಿ, ಪುರಸ್ಕಾರಗಳಿಗೆ ಅವರು ಭಾಜನರಾಗಿದ್ದರು.

ಖ್ಯಾತ ಸರೋದವಾದಕ ಪಂ. ರಾಜೀವ ತಾರಾನಾಥ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸೇರಿದಂತೆ ಅನೇಕ ಗಣ್ಯರು ಕಂಬನಿ ಮಿಡಿದಿದ್ದಾರೆ.

*******

ಮುಂದಿನ ಮೂರು ದಿನ ವಿಜಯಪುರ ಜಿಲ್ಲೆಯಲ್ಲಿ ಭಾರಿ ಮಳೆ ಸುರಿಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಈ ಸಂದರ್ಭದಲ್ಲಿ ದೋಣಿ ನದಿಯಲ್ಲಿ ಹಠಾತ್ ಪ್ರವಾಹ ಪರಿಸ್ಥಿತಿ ಉಂಟಾಗುವ ಸಂಭವವಿರುವುದರಿಂದ ಮುನ್ನೆಚ್ಚರಿಕೆಯಾಗಿ ಜನರು ನದಿಪಾತ್ರ, ಹಳ್ಳ-ಕೊಳ್ಳಗಳ ಕಡೆಗೆ. ತೆರಳಬಾರದು ಹಾಗೂ ಯಾವುದೇ ರೀತಿಯ ಸಮಸ್ಯೆಗಳು ಉಂಟಾದರೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಉಚಿತ ಸಹಾಯವಾಣಿ ಸಂಖ್ಯೆ 1077 ಕ್ಕೆ ಕರೆ ಮಾಡಬಹುದು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ತಿಳಿಸಿದ್ದಾರೆ.

*******

ಮುಂಗಾರು ಮಳೆ ಚುರುಕು ಪಡೆದ ಬೆನ್ನಲ್ಲೇ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ನಿರಂತರ ನೀರು ಹರಿದು ಬರುತ್ತಿದೆ.

ಇದರಿಂದಾಗಿ ದಿನೆ, ದಿನೇ ಜಲಾಶಯದಲ್ಲಿ ನೀರು ಸಂಗ್ರಹ ಪ್ರಮಾಣದಲ್ಲಿ ಏರಿಕೆ ಕಂಡುಬರುತ್ತಿದ್ದು, ಕೃ ಣ್ಣಾ ಅಚ್ಚುಕಟ್ಟು ಭಾಗದ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಶಕ್ತಿ ಯೋಜನೆಯಿಂದ ಔದ್ಯೋಗಿಕ ಕ್ಷೇತ್ರದಲ್ಲಿ ಮಹಿಳೆಯರ ಪಾಲುದಾರಿಕೆ ಹೆಚ್ಚಳ- ಮುಖ್ಯಮಂತ್ರಿ ಸಿದ್ದರಾಮಯ್ಯ.

ಬಿಬಿಎಂಪಿ ವ್ಯಾಪ್ತಿಯಲ್ಲಿ ಬಾಕಿ ಆಸ್ತಿ ತೆರಿಗೆ ಪಾವತಿಗೆ 'ಒಂದು ಬಾರಿ ಪರಿಹಾರ ಯೋಜನೆ'-ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.

ರಾಜ್ಯದಲ್ಲಿ ಸರ್ಕಾರಿ ಜಾಗಗಳ ಸಂರಕ್ಷಣೆ ಹಾಗೂ ಒತ್ತುವರಿ ತೆರವಿಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಅಳವಡಿಕೆ- ಕಂದಾಯ ಸಚಿವ ಕೃ ಣ್ಣಬೈರೇಗೌಡ.

2047 ರ ವೇಳೆಗೆ ಇಂಧನ ಕ್ಷೇತ್ರದಲ್ಲಿ, ಭಾರತ ಸ್ವಾವಲಂಬನೆ ಸಾಧಿಸುವುದು ನೂತನ ಸರ್ಕಾರದ ಪ್ರಮುಖ ಸಂಕಲ್ಪ- ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

ಇಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ: ವಿಧಾಯಕ ಕಾರ್ಯಕ್ರಮಗಳ ಮೂಲಕ ಜಾಗೃತಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ